# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನಾಲ್ಕನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, ದಿನಾಂಕ:16ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಬಸವರಾಜ ಬೊಮ್ಮಾಯಿ** (ಮುಖ್ಯಮಂತ್ರಿಗಳು) ಅವರು:–

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಮೇಲೆ ನೀಡುವ ಲೆಕ್ಕಪರಿಶೋಧನಾ ವರದಿಯನ್ನು (2021ನೇ ವರ್ಷದ ವರದಿ ಸಂಖ್ಯೆ:01) ಸಭೆಯ ಮುಂದಿಡುವುದು.

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಬೆಂಗಳೂರು ನಗರ ಪ್ರದೇಶದಲ್ಲಿ ಮಳೆ ನೀರು ನಿರ್ವಹಣೆಯ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿಯನ್ನು (2021ನೇ ವರ್ಷದ ವರದಿ ಸಂಖ್ಯೆ:02) ಸಭೆಯ ಮುಂದಿಡುವುದು.

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಅಡಗೂರು ಹೆಚ್. ವಿಶ್ವನಾಥ್** ಅವರು ಅಲಯನ್ಸ್ ವಿಶ್ವವಿದ್ಯಾಲಯವು ಮಾನದಂಡಗಳನ್ನು ಉಲ್ಲಂಘಿಸಿ ಗೌರವ ಡಾಕ್ಟರೇಟ್ ಪದವಿಯನ್ನು ಕ್ರಿಮಿನಲ್ ಹಿನ್ನಲೆ ಇರುವವರಿಗೆ ನೀಡಿರುವುದರ ಬಗ್ಗೆ ಉನ್ನತ ಶಿಕ್ಷಣ ಪರಿಷತ್ತು ತನ್ನ ಅಭಿಪ್ರಾಯದಲ್ಲಿ ಸರ್ಕಾರದ ಹಂತದಲ್ಲಿ ಸೂಕ್ತ ತನಿಖೆ ನಡೆಸಬಹುದೆಂದು ತಿಳಿಸಿದ್ದರೂ ಸರ್ಕಾರ ಈ ಬಗ್ಗೆ ತನಿಖೆ ನಡೆಸಿಲ್ಲದಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

..2..

೦೨. **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರು ಪಾವಗಡ ತಾಲ್ಲೂಕು ಕೇಂದ್ರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ವಿದ್ಯಾರ್ಥಿ ನಿಲಯಗಳನ್ನು ಸ್ಥಗಿತಗೊಳಿಸಿ ಚಳ್ಳಕೆರೆ ಕಲ್ಯಾಣದುರ್ಗ ಅಥವಾ ಪಾವಗಡ ಸರ್ವೆ ನಂ 178ರಲ್ಲಿರುವ 13 ಎಕರೆ ಖರಾಬು ಜಮೀನಿನಲ್ಲಿ ವಿದ್ಯಾರ್ಥಿನಿಲಯ ಕಟ್ಟಡಗಳನ್ನು ನಿರ್ಮಿಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಎಂ. ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕರು,** ಅವರು ಡಾ.ಕೆ.ಶಿವರಾಮ್ ಕಾರಂತ್ ಬಡಾವಣೆ ನಿರ್ಮಾಣಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸ್ವಾಧೀನಪಡಿಸಿಕೊಳ್ಳಲಾಗಿರುವ 3546 ಎಕರೆ 12 ಗುಂಟೆ ಜಮೀನಿಗೆ ಭೂ ಸ್ವಾಧೀನ ಕಾಯ್ದೆಯಡಿ ರೈತರುಗಳು ಸಲ್ಲಿಸಿರುವ ಆಕ್ಷೇಪಣೆಗಳಿಗೆ ಉತ್ತರವನ್ನು ನೀಡದೆ ಐತೀರ್ಪು ಮಾಡಲು ಉದ್ದೇಶಿಸಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಶಶೀಲ್ ಜಿ. ನಮೋಶಿ, ಮರಿತಿಬ್ಬೇಗೌಡ, ಕೆ.ಟಿ. ಶ್ರೀಕಂಠೇಗೌಡ, ಪುಟ್ಟಣ್ಣ, ಆಯನೂರು ಮಂಜುನಾಥ್, ಡಾ. ವೈ.ಎ. ನಾರಾಯಣಸ್ವಾಮಿ, ಎಸ್.ವ್ಹಿ. ಸಂಕನೂರ ಹಾಗೂ ಅ. ದೇವೇಗೌಡ** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಹಾಗೂ ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಹೊಂದಿದ ಉಪನ್ಯಾಸಕರಿಗೆ 6ನೇ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಬಡ್ತಿ ಪಡೆಯದೆ ಇರುವ ಉಪನ್ಯಾಸಕರಿಗೆ 10, 15, 20, 25 ವರ್ಷಗಳ ಕಾಲಮಿತಿ ಬಡ್ತಿ ಮಂಜೂರು ಮಾಡದೆ ಇರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಯುತರುಗಳಾದ ಬಿ.ಎಂ.ಫಾರೂಕ್, ಎಂ.ನಾರಾಯಣಸ್ವಾಮಿ,(ವಿಪಮುಸ) ಸಿ.ಎಂ.ಇಬ್ರಾಹಿಂ, ಎಸ್.ಎಲ್.ಭೋಜೇಗೌಡ, ಕೆ.ಹರೀಶ್ ಕುಮಾರ್, ಹೆಚ್.ಎಂ.ರಮೇಶ್‌ಗೌಡ, ಅರವಿಂದ ಕುಮಾರ್ ಅರಳಿ ಹಾಗೂ ಗೋವಿಂದ ರಾಜು** ಅವರುಗಳು ಮಂಗಳೂರಿನ ಉಳ್ಳಾಲ ಹಾಗೂ ಸುರತ್ಕಲ್ ಪ್ರದೇಶಗಳಲ್ಲಿ ಅವೈಜ್ಞಾನಿಕ ಹಾಗೂ ಅಸಮರ್ಪಕ ಒಳಚರಂಡಿ ಕ್ರಿಯಾ ಯೋಜನೆಯ ಅನುಷ್ಠಾನದ ಪರಿಣಾಮವಾಗಿ ಆ ಪ್ರದೇಶದ ಜನರು ರೋಗರುಜಿನಗಳಿಂದ ಬಳಲುತ್ತಿರುವ ಬಗ್ಗೆ ಹಾಗೂ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೆಟ್ರೋಲಿಯಂ ಮತ್ತು ಕೆಮಿಕಲ್ಸ್ ಕಂಪನಿಗಳು ಸ್ಥಾಪನೆಗೊಂಡಿದ್ದು ಸದರಿ ಪ್ರದೇಶದಲ್ಲಿ ಅಗ್ನಿಶಾಮಕ ವ್ಯವಸ್ಥೆಯನ್ನು ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಎನ್. ರವಿಕುಮಾರ್, ಎಸ್.ಆರ್. ಪಾಟೀಲ್, (ವಿಪನಾ), ಆಯನೂರು ಮಂಜುನಾಥ್, ಕೆ.ಟಿ.ಶ್ರೀಕಂಠೇಗೌಡ, ಡಾ. ವೈ.ಎ. ನಾರಾಯಣಸ್ವಾಮಿ, ಮರಿತಿಬ್ಬೇಗೌಡ, ಚಿದಾನಂದ ಎಂ.ಗೌಡ** ಹಾಗೂ ಇತರರು ಐಆರ್‌ಬಿಯಲ್ಲಿ ಪೋಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಯ ಆಯ್ಕೆ ಪ್ರಕ್ರಿಯೆಯಲ್ಲಿ ವೈದ್ಯಕೀಯ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಜಾತಿ ಸಿಂಧುತ್ವ ಹಾಗೂ ಅಂಕ ಪಟ್ಟಿಗಳ ಸಿಂಧುತ್ವ ದಾಖಲಾತಿಗಳು ಕ್ರಮಬದ್ಧವಾಗಿರುವುದಾಗಿ ಇಲಾಖೆಯಿಂದ ದೃಢೀಕರಿಸಲ್ಪಟ್ಟು ಆಯ್ಕೆಯಾಗಿರುವ 28 ಅಭ್ಯರ್ಥಿಗಳಿಗೆ ನೇಮಕಾತಿ ವಯೋಮಿತಿ ಮೀರುತ್ತಿರುವುದರಿಂದ ಕೂಡಲೇ ನೇಮಕಾತಿ ಆದೇಶ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀಯುತರುಗಳಾದ ಕೆ.ಟಿ.ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಎಸ್.ವ್ಹಿ. ಸಂಕನೂರ ಹಾಗೂ ಅರುಣ ಶಹಾಪೂರ** ಅವರುಗಳು ದಿನಾಂಕ:02.02.2000ರ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢ ಶಾಲೆಯಲ್ಲಿ 15-20 ವರ್ಷಗಳಿಂದ ಸೇವೆ ಸಲ್ಲಿಸಿರುವ "ಡಿ" ಗುಂಪು ನೌಕರರನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಪ್ರಸ್ತಾಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಡಾ. ವೈ.ಎ. ನಾರಾಯಣಸ್ವಾಮಿ** ಅವರುಗಳು } ರಾಜ್ಯದಲ್ಲಿ ಮಕ್ಕಳು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುವ ಕುರಿತು.

## 06. ಅರ್ಧ ಗಂಟೆ ಕಾಲಾವಧಿ ಚರ್ಚೆ

ರಾಷ್ಟ್ರೀಯ ಸ್ವಚ್ಛಗಾಳಿ ಕಾರ್ಯಕ್ರಮದಡಿ ರಾಜ್ಯದ ನಗರಗಳನ್ನು ಗುರುತಿಸಿ ನಿರ್ದಿಷ್ಟ ಕ್ರಿಯಾ ಯೋಜನೆಯನ್ನು ರೂಪಿಸುವ ಕುರಿತು ದಿನಾಂಕ:13.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:06(237)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಸಿ. ಕೊಂಡಯ್ಯ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**